ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ರಾಜ್ಯದಲ್ಲಿರುವ ಕೈಗಾರಿಕಾ ತರಬೇತಿ ಸಂಸ್ಥೆಗಳ ಕುರಿತು

ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ)

438 (570) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಸರ್ಕಾರಿ ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಕೈಗಾರಿಕೆ ತರಬೇತಿ ಕೇಂದ್ರಗಳಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದ ಎಷ್ಟು ಸರ್ಕಾರಿ I.T.I ಸಂಸ್ಥೆಗಳಿಗೆ ಸ್ವಂತ ಕಟ್ಟಡ ಇರುವುದಿಲ್ಲ ; (ವಿವರವಾದ ಮಾಹಿತಿ ನೀಡುವುದು)

(ಇ) ರಾಜ್ಯದ ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ ಥಾಮಸ್ ವರದಿ ಅನ್ವಯ ಅನುದಾನ ಸಂಹಿತೆಯನ್ನು ಯಾವಾಗ ಜಾರಿಗೆ ತರಲಾಗುವುದು ;

(ಈ) ಅನುದಾನಿತ ಕೈಗಾರಿಕಾ ತರಬೇತಿ ಕೇಂದ್ರಗಳ ಸಿಬ್ಬಂದಿಗಳಿಗೆ ಸದ್ಯ 3 ತಿಂಗಳಿಗೊಮ್ಮೆ ವೇತನ ಬಿಡುಗಡೆಯಾಗುತ್ತಿದ್ದು, ಅದನ್ನು ಪ್ರತಿ ತಿಂಗಳಿಗೊಮ್ಮೆ ಬಿಡುಗಡೆ ಮಾಡಲು ಸರ್ಕಾರ ಚಿಂತನೆ ನಡೆಸಿದೆಯೇ ;

(ಉ) ಕೈಗಾರಿಕಾ ತರಬೇತಿ ಕೇಂದ್ರಗಳಲ್ಲಿ ಅಧ್ಯಯನ ಮಾಡುವ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮೂಲಕ ಪರೀಕ್ಷೆ ನಡೆಸುವ ನಿರ್ಧಾರ ಕೈಗೊಂಡಿದೆಯೇ ; ಹಾಗಿದ್ದಲ್ಲಿ, ಅದಕ್ಕೆ ಪೂರಕವಾಗಿ ಯಾವ ಸಿದ್ದತೆಗಳನ್ನು ಮಾಡಿಕೊಳ್ಳಲಾಗಿದೆ ; (ವಿವರ ನೀಡುವುದು)

(ಊ) ಖಾಸಗಿ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ನಿವೃತ್ತಿ/ನಿಧನದಿಂದ ತೆರವಾದ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಯಾವ ವರ್ಷದವರಿಗೆ ಅನುಮತಿ ನೀಡಲಾಗುತ್ತಿದೆ ? (ಮಾಹಿತಿ ನೀಡುವುದು)